All India Radio: Bangalore
National Bulletin In Kannada
17.10.2026 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಮುಂದಿನ ಎಂಟು ವರ್ಷಗಳಲ್ಲಿ ಭಾರತದ ಬಾಹ್ಯಾಕಾಶ ಆರ್ಥಿಕತೆ ೪೫ ಶತಕೋಟಿ ಡಾಲರ್ ತಲುಪುವ ನಿರೀಕ್ಷೆ - ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್
- ಮಕ್ಕಳ ಲೈಂಗಿಕ ಶೋಷಣೆ, ದುರುಪಯೋಗದ ಅಂಶಗಳನ್ನು ಅಂತರ್ಜಾಲದಿಂದ ತೆಗೆದುಹಾಕಲು ಸೂಕ್ತ ಕ್ರಮಗಳಿಗೆ ಸುಪ್ರೀಂ ಕೋರ್ಟ್ ನಿರ್ದೇಶನ
- ವಿಶ್ವ ಕುಸ್ತಿ ಚಾಂಪಿಯನ್‌ಶಿಪ್: ಮಹಿಳೆಯರ ೭೨ ಕೆಜಿ ವಿಭಾಗದಲ್ಲಿ ಭಾರತದ ಅಮೃತಾ ಪೂಜಾರಿಗೆ ಬೆಳ್ಳಿ
- ಟಿ-೨೦ ಕ್ರಿಕೆಟ್: ಭಾರತ-ವೆಸ್ಟ್ ಇಂಡೀಸ್ ನಡುವಿನ ಪಂದ್ಯಕ್ಕೆ ಮಳೆ ಅಡ್ಡಿ

<><*<><>*><>

ಪ್ರಸ್ತುತ ಸುಮಾರು ೮ ಶತಕೋಟಿ ಡಾಲರ್ ಮೌಲ್ಯದ ಭಾರತದ ಬಾಹ್ಯಾಕಾಶ ಆರ್ಥಿಕತೆಯು ಮುಂದಿನ ಏಳರಿಂದ ಎಂಟು ವರ್ಷಗಳಲ್ಲಿ ೪೦ ರಿಂದ ೪೫ ಶತಕೋಟಿ ಡಾಲರ್ ತಲುಪುವ ನಿರೀಕ್ಷೆಯಿದೆ ಎಂದು ಪರಮಾಣು ಇಂಧನ ಮತ್ತು ಬಾಹ್ಯಾಕಾಶ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ಬ್ಲೂಮ್‌ಬರ್ಗ್ ಆರ್ಥಿಕ ವೇದಿಕೆ ಆಯೋಜಿಸಿದ್ದ ಬಾಹ್ಯಾಕಾಶ, ಸಾರ್ವಭೌಮತ್ವ ಮತ್ತು ಹೊಸ ಆರ್ಥಿಕತೆಯ ಕುರಿತಾದ ದುಂಡುಮೇಜಿನ ಸಭೆಯಲ್ಲಿ ಮಾತನಾಡಿದ ಅವರು, ಭಾರತೀಯ ಉದ್ಯಮಗಳನ್ನು ಹೆಚ್ಚಿಸಲು ಮತ್ತು ಜಾಗತಿಕ ಮಾರುಕಟ್ಟೆಗಳಲ್ಲಿ ಅವುಗಳ ಉಪಸ್ಥಿತಿಯನ್ನು ವಿಸ್ತರಿಸಲು ಹೆಚ್ಚಿನ ದೇಶೀಯ ಮತ್ತು ಅಂತಾರಾಷ್ಟ್ರೀಯ ಹೂಡಿಕೆ, ವೇಗವಾದ ನಿಯಂತ್ರಕ ಅನುಮೋದನೆಗಳು ಮತ್ತು ಸುಸ್ಥಿರ ವ್ಯವಹಾರ ಮಾದರಿಗಳು ಅತ್ಯಗತ್ಯ ಎಂದು ಹೇಳಿದ್ದಾರೆ. ಭಾರತ, ಈಗ ತನ್ನ ತಾಂತ್ರಿಕ ಸಾಮರ್ಥ್ಯಗಳನ್ನು ಪ್ರದರ್ಶಿಸುವುದನ್ನು ಮೀರಿ ಜಾಗತಿಕವಾಗಿ ಸ್ಪರ್ಧಾತ್ಮಕ ವಾಣಿಜ್ಯ ಬಾಹ್ಯಾಕಾಶ ಕಂಪನಿಗಳನ್ನು ನಿರ್ಮಿಸುವತ್ತ ಸಾಗಬೇಕು. ಖಾಸಗಿ ಬಾಹ್ಯಾಕಾಶ ಕಂಪನಿಗಳ ಬೆಳವಣಿಗೆಗೆ ಬೇಡಿಕೆಯನ್ನು ಸೃಷ್ಟಿಸುವುದು ಅತ್ಯಗತ್ಯ ಎಂದು ಡಾ.ಜಿತೇಂದ್ರ ಸಿಂಗ್ ಪ್ರತಿಪಾದಿಸಿದರು. ಹೆಚ್ಚಿನ ಹೂಡಿಕೆಯು ತಂತ್ರಜ್ಞಾನ ಅಭಿವೃದ್ಧಿ, ಉತ್ಪಾದನೆ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಗಳಿಗೆ ಪ್ರವೇಶವನ್ನು ಬೆಂಬಲಿಸುತ್ತದೆ. ಆದರೆ ರಾಷ್ಟ್ರೀಯ ಭದ್ರತೆ ಮತ್ತು ಕಾರ್ಯತಂತ್ರದ ಸ್ವಾಯತ್ತತೆಗೆ ದೇಶೀಯ ಸಾಮರ್ಥ್ಯಗಳು ಮುಖ್ಯವಾಗಿವೆ ಎಂದು ಸಚಿವರು ಹೇಳಿದರು.

<><*<><>*><>

ಮಕ್ಕಳ ಲೈಂಗಿಕ ಶೋಷಣೆ ಮತ್ತು ದುರುಪಯೋಗದ ಅಂಶಗಳನ್ನು ಅಂತರ್ಜಾಲದಿಂದ ಪತ್ತೆಹಚ್ಚಲು ಮತ್ತು ತೆಗೆದುಹಾಕಲು ಬಲವಾದ ತಾಂತ್ರಿಕ ಮತ್ತು ನಿಯಂತ್ರಕ ಕ್ರಮಗಳಿಗೆ ಸುಪ್ರೀಂ ಕೋರ್ಟ್ ಕರೆ ನೀಡಿದೆ. ನ್ಯಾಯಮೂರ್ತಿಗಳಾದ ಜೆ.ಬಿ.ಪರ್ದಿವಾಲಾ ಮತ್ತು ಕೆ.ವಿ.ಚಂದ್ರನ್ ಅವರಿದ್ದ ನ್ಯಾಯಪೀಠ, ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಅಂತಹ ವಿಷಯವನ್ನು ಗುರುತಿಸಲು ಮತ್ತು ತೆಗೆದುಹಾಕಲು ಸಮಗ್ರ ರಾಷ್ಟ್ರೀಯ ದತ್ತಾಂಶ ರಚಿಸಲು ನಿರ್ದೇಶಿಸಿದೆ. ೨೦೨೪ ರ ನಿರ್ದೇಶನಗಳ ಹೊರತಾಗಿಯೂ ಈ ಅಂಶಗಳ ಮುಂದುವರಿದ ಪ್ರಸರಣದ ಬಗ್ಗೆ ನ್ಯಾಯಾಲಯ ಕಳವಳ ವ್ಯಕ್ತಪಡಿಸಿದೆ. ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಹಾಗೂ ಕಾನೂನು ಮತ್ತು ನ್ಯಾಯ ಸಚಿವಾಲಯದ ಮೂಲಕ ಅಗತ್ಯ ಮಾರ್ಗಸೂಚಿಗಳು, ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳು ಮತ್ತು ಐಟಿ ನಿಯಮ ತಿದ್ದುಪಡಿಗಳನ್ನು ರೂಪಿಸಲು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಲಾಗಿದೆ. ೨೦೨೬ರ ಡಿಸೆಂಬರ್ ೧೦ ರಂದು ಮುಂದಿನ ವಿಚಾರಣೆಯ ವೇಳೆಗೆ ಸರ್ಕಾರ ಅದರ ಅನುಷ್ಠಾನದ ಪ್ರಗತಿ ವಿವರಿಸುವ ಅಫಿಡವಿಟ್ ಸಲ್ಲಿಸಬೇಕು ಎಂದು ನ್ಯಾಯಪೀಠ ನಿರ್ದೇಶಿಸಿದೆ.

<><*<><>*><>

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಅಟಲ್ ಇನ್ನೋವೇಶನ್ ಮಿಷನ್ ಕುರಿತ ಒಂದು ವರದಿ ಇಲ್ಲಿದೆ. ಭಾರತದಲ್ಲಿ ನಾವೀನ್ಯತೆಯ ವ್ಯಾಪ್ತಿಯನ್ನು ಹೆಚ್ಚಿಸುವ ಉದ್ದೇಶದಿಂದ ೨೦೧೬ರಲ್ಲಿ ನೀತಿ ಆಯೋಗದ ಅಡಿಯಲ್ಲಿ ಅಟಲ್ ಇನ್ನೋವೇಶನ್ ಮಿಷನ್ - ಎಐಎಂ ಅನ್ನು ಸ್ಥಾಪಿಸಲಾಯಿತು. ಪ್ರಮುಖ ಸಂಶೋಧನೆ ಮತ್ತು ನವೋದ್ಯಮ ಚಟುವಟಿಕೆಗಳು ಕೆಲವೇ ನಗರಗಳಿಗೆ ಮತ್ತು ಉನ್ನತ ಸಂಸ್ಥೆಗಳಿಗೆ ಸೀಮಿತವಾಗಿದ್ದ ಪರಿಸ್ಥಿತಿಯನ್ನು ಬದಲಾಯಿಸಿ, ಶಾಲಾ ಹಂತದಿಂದಲೇ ಪ್ರಾಯೋಗಿಕ, ವೈಜ್ಞಾನಿಕ ಕಲಿಕೆಯನ್ನು ತಲುಪಿಸುವುದು ಈ ಯೋಜನೆಯ ಪ್ರಮುಖ ಗುರಿಯಾಗಿದೆ. ಈ ಯೋಜನೆ ಎರಡು ಹಂತಗಳಲ್ಲಿ ಕಾರ್ಯಗತಗೊಳ್ಳುತ್ತಿದೆ. ಮೊದಲನೆಯದಾಗಿ ಶಾಲೆಗಳಲ್ಲಿ ೩ಡಿ ಪ್ರಿಂಟರ್‌ಗಳು, ಸಂವೇದಕಗಳು ಹಾಗೂ ರೋಬೋಟಿಕ್ಸ್ ಕಿಟ್‌ಗಳನ್ನು ಒಳಗೊಂಡ ಹತ್ತು ಸಾವಿರ ಅಟಲ್ ಟಿಂಕರಿಂಗ್ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ. ಎರಡನೆಯದಾಗಿ ಆರಂಭಿಕ ಹಂತದ ನವೋದ್ಯಮಗಳಿಗೆ ಬೆಂಬಲ ನೀಡಲು ೭೨ ಅಟಲ್ ಇನ್‌ಕ್ಯುಬೇಶನ್ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಇದರಿಂದ ಗಮನಾರ್ಹ ಪ್ರಮಾಣದಲ್ಲಿ

ಉದ್ಯೋಗಗಳ ಸೃಷ್ಟಿಯಾಗಿದೆ. ಶಾಲಾ ಮಟ್ಟದಲ್ಲೇ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಮನೋಭಾವವನ್ನು ಲಕ್ಷಾಂತರ ಮಕ್ಕಳಲ್ಲಿ ಬೆಳೆಸಿದ ಈ ಯೋಜನೆಯನ್ನು ೨೦೨೮ರ ವರೆಗೆ ಮುಂದುವರಿಸಲು ಕೇಂದ್ರ ಸಂಪುಟ ಅನುಮೋದನೆ ನೀಡಿದೆ.

<><*<><>*><>

ಸುದ್ದಿಪತ್ರಿಕೆಗಳು ಮತ್ತು ನಿಯತಕಾಲಿಕೆಗಳ ನೋಂದಣಿಗೆ ಸಂಬಂಧಿಸಿದಂತೆ ೧೫೦ ವರ್ಷ ಹಳೆಯದಾದ ಹಿಂದಿನ ಕಾಯಿದೆಯನ್ನು ಬದಲಾಯಿಸಿ, ಹೊಸ ’ಪ್ರೆಸ್ ಮತ್ತು ನಿಯತಕಾಲಿಕೆಗಳ ನೋಂದಣಿ ಕಾಯಿದೆ-೨೦೨೩’ ಜಾರಿಗೆ ತರಲಾಗಿದೆ ಎಂದು ಪ್ರೆಸ್ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾದ ಪ್ರಧಾನ ಮಹಾನಿರ್ದೇಶಕ ಯೋಗೇಶ್ ಕುಮಾರ್ ಬವೇಜಾ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ಭಾರತ ಸರ್ಕಾರದ ವಾರ್ತಾ ಶಾಖೆ ಬೆಂಗಳೂರು, ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಪ್ರೆಸ್ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ಹಾಗೂ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮುದ್ರಣ ಮತ್ತು ನಿಯತಕಾಲಿಕೆಗಳ ನೋಂದಣಿ ಕಾಯ್ದೆ-೨೦೨೩ ಮತ್ತು ಪ್ರೆಸ್ ಸೇವಾ ಪೋರ್ಟಲ್ ವಿಷಯದ ಕುರಿತು ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಎಲ್ಲ ಪ್ರಕ್ರಿಯೆಗಳು ಡಿಜಿಟಲ್ ಪೋರ್ಟಲ್ ಮೂಲಕವೇ ನಡೆಯಲಿದ್ದು, ಯಾವುದೇ ಭೌತಿಕ ದಾಖಲೆಗಳನ್ನು ಸಲ್ಲಿಸುವ ಅಗತ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮಾತನಾಡಿದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಜೆ.ಮಂಜುನಾಥ್, ಪತ್ರಿಕೆಗಳ ಸಂಖ್ಯೆ ಹೆಚ್ಚಳದಿಂದ ಸರ್ಕಾರಕ್ಕೆ ಆರ್ಥಿಕ ಹೊರೆಯಾಗುತ್ತಿದ್ದು, ಪ್ರಸಾರ ಸಂಖ್ಯೆ ಮೇಲೆ ಇನ್ನಷ್ಟು ನಿಗಾ ವಹಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಪಶ್ಚಿಮ ಏಷ್ಯಾ ಪ್ರದೇಶದಲ್ಲಿನ ಪ್ರಸ್ತುತ ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು, ಏರ್ ಇಂಡಿಯಾ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್ ಸಂಸ್ಥೆಗಳು ಜೆಡ್ಡಾ, ರಿಯಾದ್ ಮತ್ತು ದಮ್ಮಾಮ್‌ಗೆ ಹಾಗೂ ಅಲ್ಲಿಂದ ಬರುವ ವಿಮಾನಯಾನ ಸೇವೆಗಳನ್ನು ಈ ತಿಂಗಳ ೨೪ರವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿವೆ. ಮೊದಲೇ ಬುಕಿಂಗ್ ಮಾಡಿ, ಅಕ್ಟೋಬರ್ ೯ರಿಂದ ೨೫ರ ನಡುವೆ ಪ್ರಯಾಣಿಸಲು ಯೋಜಿಸಿದ್ದ ಪ್ರಯಾಣಿಕರು, ಮುಂದಿನ ತಿಂಗಳ ೧೦ರೊಳಗೆ ತಮ್ಮ ವಿಮಾನಯಾನ ಸಂಸ್ಥೆಯ ಮೂಲಕ ಯಾವುದೇ ಹೆಚ್ಚುವರಿ ಶುಲ್ಕವಿಲ್ಲದೆ ಪ್ರಯಾಣದ ದಿನಾಂಕವನ್ನು ಬದಲಾಯಿಸಿಕೊಳ್ಳಬಹುದು ಎಂದು ವಿಮಾನಯಾನ ಸಂಸ್ಥೆಗಳು ತಿಳಿಸಿವೆ. ಒಂದು ವೇಳೆ ಪ್ರಯಾಣಿಕರು ತಾವು ಮೊದಲು ಆಯ್ಕೆ ಮಾಡಿಕೊಂಡಿದ್ದ ಮಾರ್ಗದಲ್ಲಿ ಮುಂದಿನ

ದಿನಾಂಕಕ್ಕೆ ಮರು-ಬುಕಿಂಗ್ ಮಾಡಲು ಬಯಸದಿದ್ದರೆ, ಲಭ್ಯತೆಗೆ ಅಗುಣವಾಗಿ, ಗಲ್ಫ್ ಸಹಕಾರ ಮಂಡಳಿ ಪ್ರದೇಶದಲ್ಲಿನ ತಮ್ಮ ವಿಮಾನಯಾನ ಸಂಸ್ಥೆಯ ಸೇವೆ ಲಭ್ಯವಿರುವ ಬೇರೆ ಯಾವುದೇ ನಿಲ್ದಾಣದಿಂದ ಪ್ರಯಾಣಿಸಲು ಮರು-ಬುಕಿಂಗ್ ಮಾಡಿಕೊಳ್ಳಬಹುದು. ವಿಮಾನಗಳು ರದ್ದಾಗಿರುವ ಪ್ರಯಾಣಿಕರು, ಪ್ರಯಾಣಿಸದಿರಲು ನಿರ್ಧರಿಸಿದರೆ, ಟಿಕೆಟ್ ಹಣವನ್ನು ಸಂಪೂರ್ಣವಾಗಿ ಹಿಂಪಡೆಯುವ ಆಯ್ಕೆಯನ್ನು ಸಹ ಪಡೆಯಬಹುದು ಎಂದು ವಿಮಾನಯಾನ ಸಂಸ್ಥೆಗಳು ತಿಳಿಸಿವೆ.

<><*<><>*><>

ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಶಿಶು ಪೋಷಣೆಗಾಗಿ ಆಹಾರಗಳು ನಿಯಮಾವಳಿಗಳು, ೨೦೨೦ ಕ್ಕೆ ತಿದ್ದುಪಡಿ ತರುವ ಕರಡು ಪ್ರತಿಯನ್ನು ಪ್ರಕಟಿಸಿದೆ. ಆರು ತಿಂಗಳವರೆಗಿನ ಶಿಶುಗಳಿಗೆ ನೀಡುವ ಆಹಾರ ಉತ್ಪನ್ನಗಳಲ್ಲಿ ಸುಕ್ರೋಸ್ ಮತ್ತು ಫ್ರಕ್ಟೋಸ್ ಸೇರಿಸುವುದನ್ನು ನಿಷೇಧಿಸಲು ಇದರಲ್ಲಿ ಪ್ರಸ್ತಾಪಿಸಲಾಗಿದೆ.

<><*<><>*><>

ಅಮೆರಿಕದ ಲಾಸ್ ವೇಗಾಸ್‌ನಲ್ಲಿ ನಡೆಯುತ್ತಿರುವ ೨೩ ವರ್ಷದೊಳಗಿನವರ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ, ಭಾರತದ ಅಮೃತಾ ಪೂಜಾರಿ, ಮಹಿಳೆಯರ ೬೨ ಕೆಜಿ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದಿದ್ದಾರೆ. ಇಂದು ನಡೆದ ಫೈನಲ್ ಹಣಾಹಣಿಯಲ್ಲಿ ಅವರು ಉಕ್ರೇನ್‌ನ ಐರಿನಾ ಝುಬ್ಲೋಟ್ಸ್ಕಾ ವಿರುದ್ಧ ೦-೬ ಅಂತರದಲ್ಲಿ ಸೋತು, ಎರಡನೇ ಸ್ಥಾನಕ್ಕೆ ತೃಪ್ತಿಪಟ್ಟರು. ಇದಕ್ಕೂ ಮುನ್ನ, ನಿನ್ನೆ ನಡೆದ ಮಹಿಳೆಯರ ೫೯ ಕೆಜಿ ವಿಭಾಗದಲ್ಲಿ ಭಾರತದ ಕೋಮಲ್, ಕಂಚಿನ ಪದಕ ವಿಜೇತರಾಗಿದ್ದಾರೆ.

<><*<><>*><>

ಭಾರತ, ವೆಸ್ಟ್ ಇಂಡೀಸ್ ನಡುವಿನ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ೫ನೇ ಹಾಗೂ ಕೊನೆಯ ಪಂದ್ಯ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿದೆ. ಮಳೆಯ ಕಾರಣ ಪಂದ್ಯ ತಡವಾಗಿದೆ. ಹೈದರಾಬಾದ್‌ನಲ್ಲಿ ನಡೆದ ನಾಲ್ಕನೇ ಟಿ-೨೦ ಪಂದ್ಯದ ವೇಳೆ ಅರ್ಷದೀಪ್ ಗಾಯಗೊಂಡ ಹಿನ್ನೆಲೆಯಲ್ಲಿ, ಭುವನೇಶ್ವರ್ ಕುಮಾರ್ ಅವರನ್ನು ತಂಡಕ್ಕೆ ಸೇರಿಸಿಕೊಳ್ಳಲಾಗಿದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ತಿಳಿಸಿದೆ. ಈವರೆಗೆ ಆಡಿರುವ ನಾಲ್ಕು ಪಂದ್ಯಗಳಲ್ಲಿ ತಲಾ ಎರಡರಲ್ಲಿ ಜಯಗಳಿಸಿರುವ ಉಭಯ ತಂಡಗಳು ಸರಣಿ ಜಯಕ್ಕಾಗಿ ಇಂದು ಮುಖಾಮುಖಿಯಾಗಲಿವೆ.

<><*<><>*><>

ಅಮೆರಿಕದ ರಾಷ್ಟ್ರೀಯ ಹಿತಾಸಕ್ತಿಯನ್ನು ದೃಷ್ಟಿಯಲ್ಲಿಟ್ಟುಕೊಂಡು, ’ರಷ್ಯಾ ಮತ್ತು ಇರಾನ್ ಮೇಲಿನ ನಿರ್ಬಂಧ ಕಾಯ್ದೆ’ಯಡಿ ಅನ್ವಯವಾಗುವ ನಿರ್ಬಂಧಗಳು, ತಡೆಗಳು ಹಾಗೂ ಸುಂಕಗಳನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಾತ್ಕಾಲಿಕವಾಗಿ ಸಡಿಲಿಸಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>